**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಡೂರು**

**ಸಿಸಿ.ನಂ.3246/2023**

ಫಿರ್ಯಾದಿ : **ಅಬಕಾರಿ ಪೋಲಿಸರು, ಕಡೂರು**

ವಿರುದ್ದ

ಆರೋಪಿ : **ಶ್ರೀ ಸೀತಾರಾಮ್ ನಾಯಕ್,**
ಬಿನ್ ಶ್ರೀ ಶಾಮ್ ನಾಯಕ್,
ವಾಸಃ ವೆಂಕಟೇಶ್ವರ ನಗರ,
ಕಡೂರು.

**ದೋಷಾರೋಪಣೆ**

ಶ್ರೀಮತಿ ಸವಿತರಾಣಿ ಹೆಚ್.ವಿ., ಬಿ.ಎ.ಎಲ್., ಎಲ್.ಎಲ್.ಬಿ., 2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಕಡೂರು ಆದ ನಾನು ಈ ಮೂಲಕ ಕೆಳಕಂಡಂತೆ ಆಪಾದಿತರಾದ ನಿಮ್ಮ ಮೇಲೆ ಹೊರೆಸುವ ದೋಷಾರೋಪಣೆ.

ದಿನಾಂಕ 29.03.2023 ರಂದು ಬೀರೂರು ಪಟ್ಟಣದಿಂದ ಅಜ್ಜಂಪುರ ಪಟ್ಟಣಕ್ಕೆ ಹೋಗುವ ರಾಜ್ಯ ಹೆದ್ದಾರಿ 76 ರಲ್ಲಿ ಬರುವ ಇಂಡಿಯನ್ ಆಯಿಲ್ ಪೆಟ್ರೋಲ್ ಬಂಕ್ ಬಳಿ ಆರೋಪಿಯಾದ ನೀವು ಕೆಎ-18-ಎಸ್-4160 ರ ದ್ವಿಚಕ್ರ ವಾಹನದಲ್ಲಿ ಅಕ್ರಮವಾಗಿ ಯಾವುದೇ ಪರವಾನಗಿಯನ್ನು ಹೊಂದದೆ ಸುಮಾರು 90 ಎಂ.ಎಲ್.ನ 96 ನಂ.1 ಹೈವೆ ವಿಸ್ಕಿಯ ಸ್ಯಾಚೇಟ್‌ಗಳನ್ನು ಸಾಗಾಣಿಕೆ ಮಾಡುತ್ತಿದ್ದು. ಆದ್ದರಿಂದ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 11, 14(2), 32(1) ಮತ್ತು 38(ಎ) ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಆದ್ದರಿಂದ, ಆರೋಪಿಯಾದ ನೀವು ಮೇಲ್ಕಂಡ ದಂಡನೀಯ ಅಪರಾಧಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಒಳಪಡತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ 19.01.2024.

ಸಹಿ/-

**(ಶ್ರೀಮತಿ ಸವಿತರಾಣಿ ಹೆಚ್.ವಿ.)**
**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆಎಂಎಫ್‌ಸಿ, ಕಡೂರು.**